ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಧರ್ಮಸ್ಥಳ ಗ್ರಾಮ ಏಕಬಳಕೆ ಪ್ಲಾಸ್ಟಿಕ್ ಮುಕ್ತ ಗ್ರಾಮ ಎಂದು ಘೋಷಣೆ

ಮಹತ್ವಾಕಾಂಕ್ಷೆಯ "ಸ್ವಚ್ಛ ಭಾರತ್ ಮಿಷನ್ (ಗ್ರಾ)ಯೋಜನೆ"ಯು ಕರ್ನಾಟಕದ ವಿವಿಧ ಗ್ರಾಮೀಣ ಭಾಗಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳ್ಳುತ್ತಿದೆ. ಈ ಮೂಲಕ ಹೊಸ ಬದಲಾವಣೆಗಳಿಗೆ ತೆರೆದುಕೊಳ್ಳುತ್ತಿವೆ.

ಸ್ವಚ್ಛತೆಗೆ ತೊಡಕಾಗಿರುವ ಪ್ಲಾಸ್ಟಿಕ್ ತ್ಯಾಜ್ಯವೂ ಜಾಗತಿಕವಾಗಿ ಬಹುದೊಡ್ಡ ಸಮಸ್ಯೆಯಾಗಿದೆ. ಇದು ನೀರಲ್ಲಿ ಕರಗದ, ಮಣ್ಣಲ್ಲಿ ಮಣ್ಣಾಗದ, ಸುಟ್ಟರೆ ವಿಷಕಾರಿ ಅಂಶವನ್ನು ಗಾಳಿಗೆ ಸೇರಿಸುವ ಮೂಲಕ ಪ್ರತಿಯೊಬ್ಬರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಈ ನಿಟ್ಟಿನಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಮುಕ್ತ ಪರಿಸರ ನಿರ್ಮಾಣ ಮಹತ್ವದಾಗಿದಲ್ಲದೇ ಗ್ರಾಮಗಳ ಸ್ವಚ್ಛತೆಯನ್ನು ಕಾಪಾಡಿ ಆರೋಗ್ಯವಂತ ಸಮಾಜ ನಿರ್ಮಾಣದಲ್ಲಿ ಗ್ರಾಮಗಳ ಪಾತ್ರವೂ ಪ್ರಮುಖವಾಗಿದೆ. ಗ್ರಾಮ ಮಟ್ಟದಿಂದಲೇ ಅಪಾಯಕಾರಿ ಪ್ಲಾಸ್ಟಿಕ್ ತ್ಯಾಜ್ಯವನ್ನು ಹಂತ ಹಂತವಾಗಿ ನಿರ್ವಹಣೆ ಮಾಡುವುದು ಸ್ವಚ್ಛ ಭಾರತ್ ನ ಮುಖ್ಯ ಗುರಿಯಾಗಿದೆ. ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣದೆಡೆ ಹೆಜ್ಜೆ ಇಟ್ಟ ನಿಟ್ಟಿನಲ್ಲಿ ದಕ್ಷಿಣಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮ ಪಂಚಾಯಿತಿ ಮುಖ್ಯವಾಗಿದೆ.

## ಧರ್ಮಸ್ಥಳವನ್ನು ಪ್ಲಾಸ್ಟಿಕ್ ಮುಕ್ತ ಗ್ರಾಮವನ್ನಾಗಿಸಲು ಹಮ್ಮಿಕೊಂಡ ಕಾರ್ಯಕ್ರಮಗಳು ;

- ಗ್ರಾಮದಲ್ಲಿ ಪ್ಲಾಸ್ಟಿಕ್ ಮಾರಾಟ ಮತ್ತು ಖರೀದಿ ಮತ್ತು ಬಳಕೆ ಸಂಪೂರ್ಣವಾಗಿ ನಿಷೇಧಿಸಿದಲ್ಲದೇ, ಯಾತ್ರಿಕರು ನೇತ್ರಾವತಿ ನದಿಯಲ್ಲಿ ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯಗಳನ್ನು ಬಿಸಾಡದಂತೆ ಜಾಗೃತಿ ಮೂಡಿಸಲಾಯಿತು.
- ಏಕಬಳಕೆ ಮುಕ್ತ ಗ್ರಾಮವನ್ನಾಗಿ ರೂಪಿಸುವ ಸಲುವಾಗಿ ಪ್ರತಿದಿನ ಏಕಬಳಕೆ ಪ್ಲಾಸ್ಟಿಕ್ ನಿಷೇಧದ ಬಗ್ಗೆ ಸಾರ್ವಜನಿಕರಿಗೆ ಗ್ರಾ.ಪಂ ವಾಹನದಲ್ಲಿ ಧ್ವನಿವರ್ಧಕ ಮೂಲಕ ಅರಿವು ಮೂಡಿಸಲಾಯಿತು.
- ಗ್ರಾಮ ಪಂಚಾಯಿತಿ ಅಧಿಕಾರಿಗಳು ಸೇರಿದಂತೆ ಸಿಬ್ಬಂದಿ ವರ್ಗದವರು, ಪಂಚಾಯತಿ ಸದಸ್ಯರನ್ನು ಒಳಗೊಂಡ ತಂಡ ರಚಿಸಿ ವ್ಯಾಪಾರ ಕೇಂದ್ರಗಳಿಗೆ ಭೇಟಿಕೊಟ್ಟು ಏಕಬಳಕೆಯ ಪ್ಲಾಸ್ಟಿಕ್ ನಿಷೇಧದ ಮಹತ್ವವನ್ನು ತಿಳಿಸಿದ್ದಲ್ಲದೇ, ಅಂಗಡಿಗಳನ್ನು ಪರಿಶೀಲಿಸಲಾಯಿತು.
- ಏಕ ಬಳಕೆಯ ಪ್ಲಾಸ್ಟಿಕ್ ಇಟ್ಟುಕೊಂಡಿದ್ದ ಕೆಲ ಅಂಗಡಿಗಳಿಂದ ಪ್ಲಾಸ್ಟಿಕ್ಗಳನ್ನು ವಶಕ್ಕೆ ಪಡೆಯಲಾಯಿತು. ದಂಡವನ್ನು ಸಹ ವಿಧಿಸಲಾಯಿತು.
- ಕೆಲ ವ್ಯಾಪಾರಸ್ಥರಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಯವರ ನೇತೃತ್ವದಲ್ಲಿ ಎಚ್ಚರಿಕೆ ನೀಡಲಾಯಿತು. ಗ್ರಾಮಕ್ಕೆ ಪ್ರವೇಶ ಆಗುವ ಪ್ರದೇಶದಲ್ಲಿ ಮತ್ತು ಗ್ರಾ.ಪಂ ಆಯ್ದು ಸ್ಥಳದಲ್ಲಿ, ವ್ಯಾಪಾರ ಕೇಂದ್ರಗಳಲ್ಲಿ ಪ್ಲಾಸ್ಟಿಕ್ ನಿಷೇಧದ ಕುರಿತ ನಾಮಫಲಕ ಹಾಕಲಾಯಿತು.
- ಬಟ್ಟೆ ಮತ್ತು ಕಾಗದ ಚೀಲ ಸರಬರಾಜು : ಗ್ರಾಮ ಪಂಚಾಯಿತಿಯ ವ್ಯಾಪಾರಕ್ಕೆ ಈ ಹಿಂದೆ ಏಕ ಬಳಕೆ ಪ್ಲಾಸ್ಟಿಕ್ಕ್ನು ಸರಬರಾಜು ಮಾಡುತ್ತಿರುವ ವ್ಯಾಪಾರಿಗಳನ್ನು ಸಂಪರ್ಕಿಸಿ ಏಕ ಬಳಕೆ ಪ್ಲಾಸ್ಟಿಕ್ಕ್ನು ಸರಬರಾಜು ಮಾಡದಂತೆ ಎಚ್ಚರಿಕೆ ನೀಡಲಾಯಿತು. ಇದಕ್ಕೆ ಪರ್ಯಾಯವಾಗಿ ಬಟ್ಟೆಚೀಲ, ಹಾಳೆ ತಟ್ಟೆ,ಕಾಗದದ ಚೀಲಗಳನ್ನು ಬಳಸಲು ತಿಳಿಸಲಾಯಿತು.



ಹೀಗೆ ಏಕಬಳಕೆ ಪ್ಲಾಸ್ಟಿಕ್ ಮುಕ್ತ ಗ್ರಾಮವಾಗಲು ಬೇಕಾದ ಎಲ್ಲಾ ಕಾರ್ಯವಿಧಾನವನ್ನು ಧರ್ಮಸ್ಥಳ ಗ್ರಾಮವು ಅನುಸರಿಸಿದ್ದು, ಏಕ ಬಳಕೆ ಪ್ಲಾಸ್ಟಿಕನ್ನು ಗ್ರಾಮದಲ್ಲಿ ಬಳಸಲಾಗುತ್ತಿಲ್ಲ.ಈ ಹಿನ್ನೆಲೆಯಲ್ಲಿ **ಅರಣ್ಯ & ಪರಿಸರ ಖಾತೆ ಸಚಿವರಾದ ಈಶ್ವರ ಖಂಡ್ರೆ ಯವರು ಧರ್ಮಸ್ಥಳವನ್ನು "ಏಕಬಳಕೆ ಪ್ಲಾಸ್ಟಿಕ್ ಮುಕ್ತ ಗ್ರಾಮ" ಎಂದು ಘೋಷಣೆ ಮಾಡಿದ್ದಾರೆ.**

ಈ ಕಾರ್ಯಕ್ರಮದಲ್ಲಿ ರಾಜ್ಯಸಭಾ ನಾಯಕರಾದ ವಿರೇಂದ್ರ ಹೆಗಡೆ, ಧರ್ಮಸ್ಥಳ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಜಿಲ್ಲಾ ಎಸ್.ಬಿ.ಎಂ(ಜಿ) ಸಮಾಲೋಚಕರು ಉಪಸ್ಥಿತರಿದ್ದರು.

ಒಟ್ಟಾರೆಯಾಗಿ ಪರಿಸರದ ಮೇಲೆ ಮಾರಕ ಪರಿಣಾಮ ಬೀರುತ್ತಿರುವ ಪ್ಲಾಸ್ಟಿಕ್ ಅನ್ನು ತ್ಯಜಿಸಿ, ತ್ಯಾಜ್ಯ ಮುಕ್ತ ಭಾರತ ನಿರ್ಮಾಣಕ್ಕೆ ಶ್ರಮಿಸೋಣ

ಪ್ಲಾಸ್ಟಿಕ್ ನಿಷೇಧಿಸಿ, ಪರಿಸರ ಉಳಿಸಿ

